# All India Radio: Bangalore
# National Bulletin In Kannada
# 08.11.2025 19.35 p.m.
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
***************

**ಮುಖ್ಯಾಂಶಗಳು**

1. **ಡಿಸೆಂಬರ್ 1 ರಿಂದ ಸಂಸತ್‌ನ ಚಳಿಗಾಲದ ಅಧಿವೇಶನ ಆರಂಭ**
2. **ಬೆಂಗಳೂರು–ಎರ್ನಾಕುಲಂ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ**
3. **ಆಸ್ಟ್ರೇಲಿಯಾ ಪ್ರವಾಸೋದ್ಯಮ ಸಚಿವರೊಂದಿಗೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ಮಾತುಕತೆ**
4. **ಟಿ–20 ಕ್ರಿಕೆಟ್: ಆಸ್ಟ್ರೇಲಿಯಾ ವಿರುದ್ಧ ಸರಣಿ ವಶಪಡಿಸಿಕೊಂಡ ಭಾರತ**

***************

ಇದೇ ವರ್ಷ ಡಿಸೆಂಬರ್ ಒಂದರಿಂದ ಡಿಸೆಂಬರ್ 19ರವರೆಗೆ ಸಂಸತ್‌ನ ಚಳಿಗಾಲದ ಅಧಿವೇಶನ ನಡೆಯಲಿದೆ.
ಅಧಿವೇಶನ ಕರೆಯುವ ಸರ್ಕಾರದ ಪ್ರಸ್ತಾವನೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದಿಸಿದ್ದಾರೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ.
ಸಾಮಾಜಿಕ ಮಾಧ್ಯಮದಲ್ಲಿ ಅವರು ಪ್ರಜಾಪ್ರಭುತ್ವವನ್ನು ಬಲಪಡಿಸುವ ಮತ್ತು ದೇಶವಾಸಿಗಳ ಆಕಾಂಕ್ಷೆಗಳನ್ನು ಪೂರೈಸುವ ರಚನಾತ್ಮಕ ಮತ್ತು ಅರ್ಥಪೂರ್ಣ ಅಧಿವೇಶನವನ್ನು ಸರ್ಕಾರ ಎದುರು ನೋಡುತ್ತಿದೆ ಎಂದು ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.

***************

ವಂದೇ ಭಾರತ್, ನಮೋ ಭಾರತ್ ಮತ್ತು ಅಮೃತ್ ಭಾರತ್‌ನಂತಹ ರೈಲುಗಳು ಭಾರತೀಯ ರೈಲ್ವೆಯ ಮುಂದಿನ ಪೀಳಿಗೆಗೆ ಅಡಿಪಾಯ ಹಾಕುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಉತ್ತರ ಪ್ರದೇಶದ ವಾರಾಣಸಿಯಲ್ಲಿಂದು ನಾಲ್ಕು ನೂತನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಿಸಿದ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದರು.

ದೇಶದ ಪ್ರಮುಖ ಪ್ರದೇಶಗಳಲ್ಲಿ ಸಂಪರ್ಕ ಹೆಚ್ಚಿಸಲು ಎರ್ನಾಕುಲಂ–ಬೆಂಗಳೂರು, ಲಕ್ನೋ–ಸಹರಾನ್‌ಪುರ, ಫಿರೋಜ್‌ಪುರ–ದೆಹಲಿ ಮತ್ತು ಬನಾರಸ್–ಖಜರಾಹೊ ವಂದೇ ಭಾರತ್ ರೈಲುಗಳಿಗೆ ವಾರಾಣಸಿ ರೈಲು ನಿಲ್ದಾಣದಿಂದ ಹಸಿರು ನಿಶಾನೆ ತೋರಿದರು.

ಈಗ ವಿದೇಶಿ ಪ್ರವಾಸಿಗರು ಸಹ ವಂದೇ ಭಾರತ್ ರೈಲುಗಳನ್ನು ನೋಡಿ ಆಶ್ಚರ್ಯಚಕಿತರಾಗುತ್ತಿದ್ದಾರೆ. ದೇಶದಲ್ಲಿ ಪ್ರಸ್ತುತ 160ಕ್ಕೂ ಹೆಚ್ಚು ವಂದೇ ಭಾರತ್ ರೈಲುಗಳು ಕಾರ್ಯನಿರ್ವಹಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಅಭಿವೃದ್ಧಿ ಹೊಂದಿದ ದೇಶಗಳ ಆರ್ಥಿಕ ಬೆಳವಣಿಗೆಯಲ್ಲಿ ಮೂಲಸೌರ್ಯ ಪ್ರಮುಖ ಅಂಶವಾಗಿದೆ. ಭಾರತವು ಅಭಿವೃದ್ಧಿಯ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉಪಸ್ಥಿತರಿದ್ದರು.

ಬೆಂಗಳೂರು–ಎರ್ನಾಕುಲಂ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಪ್ರಯಾಣ ಸಮಯವನ್ನು ಎರಡು ಗಂಟೆ ತಗ್ಗಿಸುತ್ತದೆ. ಪ್ರಯಾಣವನ್ನು 8 ಗಂಟೆ 40 ನಿಮಿಷಗಳಲ್ಲಿ ಪೂರ್ಣಗೊಳಿಸುತ್ತದೆ.

***************

ಉಪರಾಷ್ಟ್ರಪತಿ ರಾಧಾಕೃಷ್ಣನ್ ನಾಳೆ ಕರ್ನಾಟಕಕ್ಕೆ ಭೇಟಿ ನೀಡಲಿದ್ದಾರೆ. ಉಪರಾಷ್ಟ್ರಪತಿ ಆದ ನಂತರ ಇದು ಅವರ ಮೊದಲ ರಾಜ್ಯ ಪ್ರವಾಸವಾಗಿದೆ. ಅವರು, ಶ್ರವಣಬೆಳಗೊಳ, ಮಂಡ್ಯದ ಮೇಲುಕೋಟೆ ಹಾಗೂ ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಶ್ರವಣಬೆಳಗೊಳದಲ್ಲಿ ಆಚಾರ್ಯ ಶಾಂತಿ ಸಾಗರ್ ಮಹಾರಾಜರ ವಿಗ್ರಹ ಪ್ರತಿಷ್ಠಾಪನಾ ಸಮಾರಂಭ ಮತ್ತು ನಾಲ್ಕನೇ ಬೆಟ್ಟದ ನಾಮಕರಣ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮೈಸೂರಿನಲ್ಲಿ ಚಾಮುಂಡಿ ಬೆಟ್ಟ ಹಾಗೂ ಸುತ್ತೂರು ಮಠಕ್ಕೂ ಉಪರಾಷ್ಟ್ರಪತಿ ಅವರು ಭೇಟಿ ನೀಡಲಿದ್ದಾರೆ.

***************

ನವದೆಹಲಿಯ ಸುಪ್ರೀಂಕೋರ್ಟ್‌ನಲ್ಲಿಂದು ಕಾನೂನು ನೆರವನ್ನು  ಬಲಪಡಿಸುವ ಕುರಿತು ರಾಷ್ಟ್ರೀಯ ಸಮ್ಮೇಳನವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು.

ಇದೇ ವೇಳೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಸಿದ್ಧಪಡಿಸಿರುವ ಸಮುದಾಯ ಮಧ್ಯಸ್ಥಿಕೆ ತರಬೇತಿ ಮಾದರಿಗೆ ಪ್ರಧಾನಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸಾಮಾಜಿಕ ಅಥವಾ ಆರ್ಥಿಕ ಹಿನ್ನೆಲೆಯನ್ನು ಲೆಕ್ಕಿಸದೆ ಎಲ್ಲರಿಗೂ ನ್ಯಾಯ ತಲುಪಿದಾಗ ಮಾತ್ರ ಸಾಮಾಜಿಕ ನ್ಯಾಯ ಖಚಿತಪಡಿಸಿಕೊಳ್ಳಬಹುದು ಎಂದು ಹೇಳಿದರು.

ಸ್ಥಳೀಯ ಭಾಷೆಯಲ್ಲಿ ಕಾನೂನು ದಾಖಲೆಗಳನ್ನು ಲಭ್ಯವಾಗುವಂತೆ ಮಾಡಬೇಕಿದೆ. ಕಳೆದ ಕೆಲವು ವರ್ಷಗಳಲ್ಲಿ ನ್ಯಾಯದ ಸುಲಭತೆಯನ್ನು ಹೆಚ್ಚಿಸಲು ಹಲವಾರು ಕ್ರಮಗಳನ್ನು ಕೇಂದ್ರ ಸರ್ಕಾರ ತೆಗೆದುಕೊಂಡಿದೆ. ಕಾನೂನು ಜಾಗೃತಿಯನ್ನು ಉತ್ತೇಜಿಸುವುದು ಸರ್ಕಾರಕ್ಕೆ ಪ್ರಮುಖ ಆದ್ಯತೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಈ ವೇಳೆ ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೆಘವಾಲ್ ಉಪಸ್ಥಿತರಿದ್ದರು. ಎರಡು ದಿನಗಳ ಸಮ್ಮೇಳನದಲ್ಲಿ ಕಾನೂನು ನೆರವು ರಕ್ಷಣಾ ಸಲಹೆಗಾರ ಸಂಸ್ಥೆ, ವಕೀಲರು, ಸ್ವಯಂ ಸೇವಕರು, ಶಾಶ್ವತ ಲೋಕ ಅದಾಲತ್‌ಗಳು ಮತ್ತು ಕಾನೂನು ಸೇವಾ ಸಂಸ್ಥೆಗಳ ಹಣಕಾಸು ನಿರ್ವಹಣೆಯಂತಹ ಕಾನೂನು ಸೇವೆಗಳ ಪ್ರಮುಖ ಅಂಶಗಳ ಕುರಿತು ಚರ್ಚಿಸಲಾಗುತ್ತದೆ.

***************

ಆಸ್ಟ್ರೇಲಿಯಾದ ವ್ಯಾಪಾರ ಮತ್ತು ಪ್ರವಾಸೋದ್ಯಮ ಸಚಿವ ಡಾನ್ ಫಾರೆಲ್ ಹಾಗೂ ಆಸ್ಟ್ರೇಲಿಯಾ ಕೌಶಲ್ಯ ಮತ್ತು ತರಬೇತಿ ಸಚಿವ ಆಂಡ್ರ್ಯೂ ಗೈಲ್ಸ್ ಅವರನ್ನು ಮೆಲ್ಬೋರ್ನ್‌ನಲ್ಲಿಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಭೇಟಿಯಾಗಿ ಮಾತುಕತೆ ನಡೆಸಿದರು.

ಮಹತ್ವಕಾಂಕ್ಷೆಯ ಮತ್ತು ಸಮತೋಲಿತ ಸಮಗ್ರ ಆರ್ಥಿಕ ಸಹಕಾರ ಒಪ್ಪಂದ ಭಾರತ ಆಸ್ಟ್ರೇಲಿಯಾ ಆರ್ಥಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಗೊಳಿಸುವ ನಿಟ್ಟಿನಲ್ಲಿ ಚರ್ಚೆಗಳು ನಡೆಯಿತು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವ ಪಿಯೂಶ್ ಗೋಯಲ್ ಹೇಳಿದ್ದಾರೆ.

***************

ಅಸ್ಸಾಂನ ಬಿಸ್ವನಾಥ ಜಿಲ್ಲೆಯ ಭೋಲಾಗುರಿಯಲ್ಲಿ ತಾಂತ್ರಿಕ, ವೃತ್ತಿಪರ ಶಿಕ್ಷಣ ಮತ್ತು ತರಬೇತಿಯನ್ನು ಕೇಂದ್ರೀಕರಿಸಿದ ರಾಜ್ಯದ ಮೊದಲ ವಿಶ್ವವಿದ್ಯಾಲಯಕ್ಕೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಡಿಪಾಯ ಹಾಕಿದರು.

ಸ್ವಹಿದ್ ಕನಕಲತಾ ಬರುವಾ ವಿಶ್ವವಿದ್ಯಾಲಯವು ಕೃತಕ ಬುದ್ಧಿಮತ್ತೆ, ಮಿಷನ್ ಲರ್ನಿಂಗ್, ಸೈಬರ್ ಭದ್ರತೆ, ಬ್ಲಾಕ್‌ಚೈನ್, ಡ್ರೋನ್, ನ್ಯಾವಿಗೇಷನ್ ತಂತ್ರಜ್ಞಾನ, ಕ್ವಾಟಮ್ ಕಂಪ್ಯೂಟಿಂಗ್, ಬ್ರೇನ್ ಕಂಪ್ಯೂಟರ್ ಇಂಟರ್ ಫೇಸ್ ಹಾಗೂ ಸ್ಮಾರ್ಟ್ ನಗರಗಳು ಮತ್ತು ಸ್ಮಾರ್ಟ್ ಪರಿಸರಗಳು ಸೇರಿದಂತೆ ವಿವಿಧ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕೋರ್ಸ್‌ಗಳನ್ನು ಆರಂಭಿಸಲಿದೆ. ಒಟ್ಟು 241 ಎಕರೆ ಪ್ರದೇಶದಲ್ಲಿ 7 ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ವಿಶ್ವವಿದ್ಯಾಲಯ ಸ್ಥಾಪನೆಯಾಗಲಿದೆ.

ಕಾರ್ಯಕ್ರಮದಲ್ಲಿ ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಶರ್ಮಾ ಕೂಡ ಉಪಸ್ಥಿತರಿದ್ದರು.

***************

ನಗರೀಕರಣವು ವಿಕಸಿತ ಭಾರತಕ್ಕೆ ದಾರಿಯಾಗಿದೆ. ಭಾರತದ ನಗರ ಪರಿವರ್ತನೆಯು ನಾಗರಿಕ ಕೇಂದ್ರೀತ, ಎಲ್ಲರನ್ನು ಒಳಗೊಳ್ಳುವ ಮತ್ತು ಸುಸ್ಥಿರವಾಗಿರಬೇಕು ಎಂದು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಪ್ರತಿಪಾದಿಸಿದ್ದಾರೆ.

ನವದೆಹಲಿಯಲ್ಲಿಂದು ಪ್ರಾರಂಭವಾದ ರಾಷ್ಟ್ರೀಯ ನಗರ ಸಮ್ಮೇಳನ–2025ರ ಉದ್ಘಾಟನಾ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ದಶಕಗಳಲ್ಲಿ ನಗರ ವಲಯದಲ್ಲಿನ ಹೂಡಿಕೆಗಳು ವೇಗವಾಗಿ ಹೆಚ್ಚಿವೆ. ಇದು ಸ್ವಚ್ಛ ನಗರ, ಆರೋಗ್ಯಕರ ನಗರ ಮತ್ತು ಸಮೃದ್ಧ ನಗರಗಳನ್ನು ರಚಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ಇದೇ ವೇಳೆ ಸಚಿವ ಮನೋಹರ್ ಲಾಲ್, ರಾಷ್ಟ್ರೀಯ ನಗರ ವ್ಯವಹಾರಗಳ ಸಂಸ್ಥೆಯಲ್ಲಿ ಸ್ಥಾಪಿಸಲಾದ ಜ್ಞಾನ ನಿರ್ವಹಣಾ ಘಟಕವನ್ನು ಲೋಕಾರ್ಪಣೆಗೊಳಿಸಿದರು.

***************

ಭಾರತೀಯ ನೌಕಾಪಡೆಯು ಡಿಸೆಂಬರ್ 4 ರಂದು ತಿರುವನಂತಪುರದಲ್ಲಿ ಅದ್ಭುತ ಕಾರ್ಯಾಚರಣೆಯ ಪ್ರದರ್ಶನದೊಂದಿಗೆ ನೌಕಾಪಡೆ ದಿನವನ್ನು ಆಚರಿಸಲು ಮುಂದಾಗಿದೆ.

ಈ ಬೃಹತ್ ಕಾರ್ಯಕ್ರಮವು ನಾಗರಿಕರಿಗೆ ಭಾರತೀಯ ನೌಕಾಪಡೆಯ ವಿವಿಧ ಕಾರ್ಯಾಚರಣೆಗಳನ್ನು ವೀಕ್ಷಿಸಲು ಒಂದು ಅನನ್ಯ ಅವಕಾಶವನ್ನು ಒದಗಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಕಾರ್ಯಾಚರಣೆ ಪ್ರದರ್ಶನವು ನೌಕಾಪಡೆಯ ಅತ್ಯಾಧುನಿಕ ಕಾರ್ಯಾಚರಣೆ ವಿಧಾನ ಮತ್ತು ಹಿಂದೂ ಮಹಾಸಾಗರ ಪ್ರದೇಶದಲ್ಲಿ ಆದ್ಯತೆಯ ಭದ್ರತಾ ಪಾಲುದಾರನಾಗಿ ಅದರ ಸಂಕಲ್ಪವನ್ನು ಪ್ರದರ್ಶಿಸುತ್ತದೆ. ಪ್ರದೇಶಾದ್ಯಂತ ಭದ್ರತೆ ಮತ್ತು ಬೆಳವಣಿಗೆಗೆ ಪರಸ್ಪರ ಹಾಗೂ ಸಮಗ್ರ ಪ್ರಗತಿಯ ವಿಶಾಲ ದೃಷ್ಟಿಕೋನದಿಂದ ಮಾರ್ಗದರ್ಶಿಸಲ್ಪಡುತ್ತದೆ.

ಈ ಪ್ರದರ್ಶನವು ನಿಖರತೆ, ವೇಗ ಮತ್ತು ಪ್ರಾಬಲ್ಯದೊಂದಿಗೆ ದಾಳಿ ಮಾಡುವ ಭಾರತೀಯ ನೌಕಾಪಡೆಯ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

***************

ಆಸ್ಟ್ರೇಲಿಯಾದ ಬ್ರಿಸ್‌ಬೇನ್‌ನ ಗಬ್ಬಾದಲ್ಲಿ ನಡೆಯಬೇಕಿದ್ದ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಅಂತಿಮ ಟಿ–20 ಕ್ರಿಕೆಟ್ ಪಂದ್ಯ ಮಳೆಯಿಂದಾಗಿ ರದ್ದಾಗಿದೆ.

ಇದರಿಂದಾಗಿ ಭಾರತ 2–1 ಅಂಕಗಳಿಂದ ಸರಣಿ ವಶಪಡಿಸಿಕೊಂಡಿದೆ. ಮಳೆಯಿಂದಾಗಿ ಪಂದ್ಯ ರದ್ದಾಗುವ ಮುನ್ನ ಭಾರತ ವಿಕೆಟ್ ನಷ್ಟವಿಲ್ಲದೇ 52 ರನ್ ಗಳಿಸಿತ್ತು. ಶುಭ್‌ಮನ್ ಗಿಲ್ 23 ಮತ್ತು ಅಭಿಷೇಕ್ ಶರ್ಮಾ 23 ರನ್‌ಗಳಿಸಿದ್ದರು.

ಟಾಸ್ ಗೆದ್ದ ಆಸ್ಟ್ರೇಲಿಯಾ ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಕಳೆದ 17 ವರ್ಷಗಳಲ್ಲಿ ಟಿ–20 ಕ್ರಿಕೆಟ್ ವಲಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಅಜೇಯ ಓಟವನ್ನು ಭಾರತ ಮುಂದುವರೆಸಿದೆ.

***************

ಅಫ್ಘಾನಿಸ್ತಾನದ ಕಂದಹಾರ್ ಪ್ರಾಂತ್ಯದ ಸ್ಪಿನ್‌ಬೋಲ್ಡಕ್ ಜಿಲ್ಲೆಯಲ್ಲಿ ಪಾಕಿಸ್ತಾನಿ ಪಡೆಗಳು ನಡೆಸಿದ ದಾಳಿಯಲ್ಲಿ 6 ನಾಗರಿಕರು ಸಾವನ್ನಪ್ಪಿದ್ದು, ಇತರೆ ಐದು ಮಂದಿ ಗಾಯಗೊಂಡಿದ್ದಾರೆ.

ದಾಳಿಯಲ್ಲಿ ಮೂರು ಮನೆಗಳಿಗೆ ಹಾನಿಯಾಗಿವೆ. ವಸತಿ ಮತ್ತು ವಾಣಿಜ್ಯ ಪ್ರದೇಶದ ಮೇಲೆ ಪಾಕಿಸ್ತಾನಿ ಪಡೆಗಳು ಶೆಲ್ ಮತ್ತು ಫಿರಂಗಿ ದಾಳಿ ನಡೆಸಿವೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಪಾಕಿಸ್ತಾನವು ಕದನ ವಿರಾಮವನ್ನು ಉಲ್ಲಂಘಿಸಿದೆ ಎಂದು ಅಫ್ಘಾನಿಸ್ತಾನ ಅಧಿಕಾರಿಗಳು ಆರೋಪಿದ್ದಾರೆ. ಇಸ್ತಾನ್‌ಬುಲ್‌ನಲ್ಲಿ ಪಾಕಿಸ್ತಾನ ಮತ್ತು ತಾಲಿಬಾನ್ ಅಧಿಕಾರಿಗಳು ನಡೆಸಿದ ಶಾಂತಿ ಮಾತುಕತೆಗಳು ವಿಫಲವಾದ ಬೆನ್ನಲ್ಲೇ ಈ ದಾಳಿ ನಡೆದಿವೆ.

*******ಮುಕ್ತಾಯ********